# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸಕಾಅ/ವಾ.ನಂ.39/ಪಿಆರ್/೩೪/2021-22

ಸಹಾಯಕ ಕಾರ್ಯಪಾಲಕ ಅಭಿಯಂತರವರ ಕಛೇರಿ
ಪೀಣ್ಯ ಕೈಗಾರಿಕಾ ಪ್ರದೇಶ ಉಪವಿಭಾಗ, ದಾಸರಹಳ್ಳಿ ವಲಯ
ಹೆಚ್.ಎಂ.ಟಿ.ಬಡಾವಣೆ, ನಾಗಸಂದ್ರ ಪೋಸ್ಟ್
ಬೆಂಗಳೂರು, ದಿನಾಂಕ : 21-12-2021

## ವಾರ್ಡ್ -39ರ ವಾರ್ಡ್ ಸಭೆಯ ನಡವಳಿ

ದಿನಾಂಕ:-21-12-2021 ರಂದು ಪೀಣ್ಯ ಕೈಗಾರಿಕ ಪ್ರದೇಶ ಉಪ ವಿಭಾಗ ವಾರ್ಡ್ ನಂ.39 ರ ವಾರ್ಡ್ ಕಛೇರಿಯಲ್ಲಿ ಶ್ರೀ.ಪುಟ್ಟಸ್ವಾಮಿ ಜೆ. ವಾರ್ಡ್-39 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿಗಳು.

ಹಾಜರಿದ್ದವರು:

1. ಶ್ರೀ ಪುಟ್ಟಸ್ವಾಮಿ ಜೆ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು
2. ಶ್ರೀಮತಿ.ಅರ್ಚನ ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ
3. ಶ್ರೀ.ರಾಮಕೃಷ್ಣ, ಮೌಲ್ಯ ಮಾಪಕರು, ವಾ.ನಂ.39
4. ಶ್ರೀ ಹೆಚ್.ರಮೇಶ್, ಕಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಸದಸ್ಯರು
5. ನಾರಯಾಣ, ವಿದ್ಯುತ್ ಸಹಾಯಕ ದಾಸರಹಳ್ಳಿ ವಲಯ
6. ಡಿ.ಆರ್.ಮಾಳಯ್ಯ, ನೀರು ಸರಬರಾಜು ಸಹಾಯಕರು ವಾ.ನಂ.39
7. ರಮೇಶ್.ಟಿ. ನೀರು ಸರಬರಾಜು ಸಹಾಯಕರು ವಾ.ನಂ.39

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು

- ಹಿಂದಿನ ಸಭೆಯ ನಡವಳಿಗಳು ಓದಿ ರೆಕಾರ್ಡ್ ಮಾಡಲಾಯಿತು ಅದರಂತೆ ಡಿ.ಡಬ್ಲ್ಯೂ.ಸಿ.ಸಿ ಸೆಂಟರ್‌ನಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ ತುರ್ತಾಗಿ ಕ್ರಮವಹಿಸುವಂತೆ ತಿಳಿಸಲಾಯಿತು.
- ಡಿ.ಡಬ್ಲ್ಯೂ.ಸಿ.ಸಿ ಸೆಂಟರ್ ವಾರ್ಡ್ ನಂ.39 ರಲ್ಲಿ ಶೌಚಾಲಯಕ್ಕೆ ನೀರಿನ ವ್ಯವಸ್ಥೆ ತುರ್ತಾಗಿ ಕಲ್ಪಿಸುವಂತೆ ಅಂದಾಜು ಪಟ್ಟಿ ತಯಾರಿಸಿ ಕೆಲಸ ಪ್ರಾರಂಭಿಸುವಂತೆ ನಿರ್ಣಯಿಸಲಾಯಿತು.
- ಘನತ್ಯಾಜ್ಯ ನಿರ್ವಹಣೆ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ ವಾರ್ಡ್ ಸಂಖ್ಯೆ 39 ರಲ್ಲಿ ಗುತ್ತಿಗೆದಾರರಿಂದ ಸ್ವಚ್ಛತೆ ಕೆಲಸ ನಡೆಯುತ್ತಿದ್ದು ಜಿ.ಪಿ.ಎಸ್ ಮತ್ತು ಆರ್ ಎಫ್ ಐ ಡಿ ವಿಧಾನವನ್ನು ಆಟೋ ಟಿಪ್ಪರ್‌ಗಳಿಗೆ ಅಳವಡಿಸಲಾಗಿದ್ದು ಅದರಂತೆ ನಿರ್ವಹಿಸಲಾಗುತ್ತಿದೆ. ಪೌರಕಾರ್ಮಿಕರಿಗೆ Street ID ಯಂತೆ ರಸ್ತೆಯನ್ನು ನೀಡಲಾಗಿದ್ದು ಪ್ರತಿನಿತ್ಯ ಬೀದಿ ಕಸ ಗುಡುಸುವುದನ್ನು ಪರಿಶೀಲಿಸಲುವುದು ಯಾವುದೇ ಘನತ್ಯಾಜ್ಯ ಸಮಸ್ಯೆಯನ್ನು ತುರ್ತಾಗಿ ಪರಿಹರುಸುವುದು ಎಂದು ಸಭೆಗೆ ಮಾಹಿತಿ ನೀಡಿದರು.
- ಬೀದಿ ದೀಪಗಳ ನಿರ್ವಹಣೆ ಬಗ್ಗೆ ಬೀದಿ ದೀಪ ನಿರ್ವಹಣೆಯವರು ಮಾತನಾಡುತ್ತಾ ತುರ್ತಾಗಿ ರಿಪೇರಿ ಮಾಡುವಂತೆ ತಿಳಿಸಲಾಯಿತು. ಅಧ್ಯಕ್ಷರು ಮಾತನಾಡುತ್ತಾ ಬೀದಿದೀಪವನ್ನು ರಾತ್ರಿ ವೇಳೆ ಪರಿಶೀಲಿಸಿ ಬೆಳ್ಳಿಗ್ಗೆ ತುರ್ತಾಗಿ ಸರಿಪಡಿಸುವಂತೆ ತಿಳಿಸಲಾಯಿತು.
- ಸಿ.ಸಿ.ಟಿ.ವಿ ಬಗ್ಗೆ ಅನುದಾನ ಇಲ್ಲದಿರುವುದರಿಂದ ಮೇಲಾಧಿಕಾರಿಗಳ ಗಮನಕ್ಕೆ ತಂದು ಸಮಸ್ಯೆ ಬಗೆಹರಿಸಿವಂತೆ ಅಧ್ಯಕ್ಷರು ಸಭೆಗೆ ಸೂಚಿಸಿದರು

ಮು.ತಿ.ನೋ

ಉದ್ಯಾನವನಗಳು ಸಾರ್ವಜನಿಕರಿಗೆ ಉತ್ತಮ ರೀತಿಯಲ್ಲಿ ವಾಕಿಂಗ್ ಮಾಡಲು ಶೌಚಿತ್ವ ಕಾಪಾಡುವಂತೆ ಸೂಚಿಸಲಾಯಿತು.

- ವಾರ್ಡ್‌ನಲ್ಲಿ ಗುಂಡಿಮುಚ್ಚುವ ಕೆಲಸ ನಡೆಯುತ್ತದೆ ತುರ್ತಾಗಿ ಗುಂಡಿ ಮುಚ್ಚುವ ಕೆಲಸ ಮುಗಿಸುವಂತೆ ಸಭೆಯಲ್ಲಿ ಸೂಚಿಸಲಾಯಿತು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡ ಎಲ್ಲಾ ಇಲಾಖೆಗಳ ಸಮನ್ವತೆಯಿಂದ ಕೆಲಸ ನಿರ್ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 39 ಚೊಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ. 39 ಚೊಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಅಧಿಕಾರಿಗಳ ಮಾಹಿತಿಗಾಗಿ

1.ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
2.ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3.ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
4.ಕಾರ್ಯಪಾಲಕ ಅಭಿಯಂತರರು, ದಾ.ಪ ರವರ ಮಾಹಿತಿಗಾಗಿ ಕಳುಹಿಸಿದೆ.
5.ಸಹಾಯಕ ಕಾರ್ಯಪಾಲಕ ಅಭಿಯಂತರರು (ಪೀ.ಕ್ಯೈಪ್ರ)ರವರ ಮಾಹಿತಿಗಾಗಿ ಕಳುಹಿಸಿದೆ
6.ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ರವರ ಮಾಹಿತಿಗಾಗಿ ಕಳುಹಿಸಿದೆ
7.ಸಹಾಯಕ ಕಾರ್ಯಪಾಲಕ ಅಭಿಯಂತರರು (SWD) ರವರ ಮಾಹಿತಿಗಾಗಿ ಕಳುಹಿಸಿದೆ
8.ಸಹಾಯಕ ಕಾರ್ಯಪಾಲಕ ಅಭಿಯಂತರರು (BWSSB)ರವರ ಮಾಹಿತಿಗಾಗಿ ಕಳುಹಿಸಿದೆ
9.ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರ ಮಾಹಿತಿಗಾಗಿ ಕಳುಹಿಸಿದೆ
10.ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ) ರವರ ಮಾಹಿತಿಗಾಗಿ ಕಳುಹಿಸಿದೆ
11.ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಎನ್-5 ಪೀಣ್ಯ ರವರ ಮಾಹಿತಿಗಾಗಿ ಕಳುಹಿಸಿದೆ